# ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದ ಸ್ಪೀಕರ್

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಮೈತ್ರಿ ಸರಕಾರದ ಭವಿಷ್ಯ ನಿರ್ಣಯಿಸುವ ಶಾಸಕರ ರಾಜೀನಾಮೆ ಪ್ರಕರಣದ ಬಗ್ಗೆ ವಿಧಾನಸಭೆ ಸ್ಪೀಕರ್ ರಮೇಶ್ ಕುಮಾರ್ ಸಂಪೂರ್ಣ ವಿಡಿಯೊ ಚಿತ್ರೀಕರಣಕ್ಕೆ ಸೂಚನೆ ನೀಡಿರುವುದು ಗಮನ ಸೆಳೆದಿದೆ.



ಮತ್ತೊಂದೆಡೆ ಬಿಗಿ ಭದ್ರತೆ ವ್ಯವಸ್ಥೆ ಮಾಡುತ್ತಿದ್ದ ಪೊಲೀಸರು, ವಿಧಾನಸೌಧದ ಆವರಣವನ್ನು ಸಂಪೂರ್ಣ ವಿಡಿಯೊ ಕಣ್ಗಾವಲಿಗೆ ಒಳಪಡಿಸಿದ್ದರು. ಪೇದೆಗಳು ಅಲ್ಲಲ್ಲಿ ಕ್ಯಾಮರಾ ಹಿಡಿದು, ಒಳಗೆ ಬರುವವರ, ಹೊರ ಹೋಗುವವರನ್ನು ಚಿತ್ರೀಕರಣ ಮಾಡಿಕೊಳ್ಳುತ್ತಿದ್ದರು.

ಅತೃಪ್ತ ಶಾಸಕರ ರಾಜೀನಾಮೆ ಪ್ರಕರಣದ ಬಗ್ಗೆ ವಿಚಾರಣೆ ಮಾಡಿ ನಿರ್ಧಾರ ತಿಳಿಸುವಂತೆ ಸುಪ್ರೀಂ ಕೋರ್ಟ್ ನೀಡಿದ ಸೂಚನೆಯನ್ವಯ ಸ್ಪೀಕರ್ ರಮೇಶ್ ಕುಮಾರ್ ಪಾರದರ್ಶಕತೆಗೆ ಆದ್ಯತೆ ನೀಡಿದ್ದರು. ಇದಕ್ಕಾಗಿ ಖಾಸಗಿ ವಿಡಿಯೊ ಗ್ರಾಫರ್ ಒಬ್ಬರನ್ನು ನೇಮಿಸಿಕೊಂಡಿದ್ದರು. ಇದೇ ಮೊದಲ ಬಾರಿಗೆ ಶಾಸಕರ ರಾಜೀನಾಮೆ ಪ್ರಕರಣದ ವಿಚಾರಣೆಯಲ್ಲಿ ವಿಡಿಯೊ ಚಿತ್ರೀಕರಣ ಮಾಡಿದ್ದು, ಇದು ಹೊಸ ಸಂಪ್ರದಾಯಕ್ಕೆ ನಾಂದಿ ಹಾಡಿದೆ.

ರಮೇಶ್ ಕುಮಾರ್ ಸಂಜೆ 4 ಗಂಟೆ ಸುಮಾರಿಗೆ ಕಚೇರಿಗೆ ಆಗಮಿಸುತ್ತಿದ್ದಂತೆ ತಮ್ಮ ಕೊಠಡಿಯ ಮುಂಭಾಗ ನಿಂತಿದ್ದ ವಿಡಿಯೊ ಗ್ರಾಫರ್‌ಗೆ ತಮ್ಮ ಕೊಠಡಿ ಮುಂದೆ ಇರುವ ಎಲ್ಲರನ್ನೂ ಚಿತ್ರೀಕರಣ ಮಾಡಿಕೊಂಡು, ನಂತರ ತಮ್ಮ ಕಚೇರಿಯೊಳಗೆ ಪ್ರವೇಶಿಸುವಂತೆ ಸೂಚಿಸಿದರು. ಬಳಿಕ ಸ್ಪೀಕರ್ ಕೊಠಡಿಯಲ್ಲಿ ನಡೆದ ಸಂಪೂರ್ಣ ವಿಚಾರಣೆಯನ್ನು ಚಿತ್ರೀಕರಣ ಮಾಡಿಕೊಳ್ಳಲಾಗಿದೆ.

ವಿಚಾರಣೆಗೂ ಮುನ್ನ ಸುದ್ದಿಗಾರರ ಜತೆ ಮಾತನಾಡಿದ ಸ್ಪೀಕರ್ ರಮೇಶ್ ಕುಮಾರ್, ನ್ಯಾಯಾಲಯದ ಆದೇಶದಂತೆ ವಿಚಾರಣೆ ನಡೆಸಿ ತೀರ್ಮಾನ ಮಾಡಿ, ನ್ಯಾಯಾಲಯಕ್ಕೆ ತಿಳಿಸಲಾಗುವುದು. ಸುಪ್ರೀಂ ಕೋರ್ಟ್‌ನಲ್ಲಿ ತಮ್ಮ ಪರವಾಗಿ ವಕೀಲರು ಹಾಜರಾಗಲಿದ್ದಾರೆ. ನನ್ನ ವಕೀಲರು ಏನು ಹೇಳಬೇಕು ಅದನ್ನು ಕೋರ್ಟ್‌ನಲ್ಲಿ ಹೇಳುತ್ತಾರೆ. ಅದರ ಮೇಲೆ ಏನಾಗುತ್ತದೆಯೋ ಆಮೇಲೆ ನೋಡೋಣ. ಬಳಿಕ ಕಾನೂನು ಪ್ರಕಾರ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದರು.